ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ
ಮಂಗಳೂರು
19 MAR 2022
PILIKULA DEVELOPMENT AUTHORITY
Mangaluru

I/233510/2022

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018- ರಾಜ್ಯ ಮಟ್ಟದ ಸಲಹಾ ಸಮಿತಿ ಮತ್ತು ಪ್ರಾಧಿಕಾರಕ್ಕೆ ಸರ್ಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡುವ ಕುರಿತು.

ಓದಲಾಗಿದೆ : 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 08 ಶಾಸನ 2018, ದಿನಾಂಕ:09.03.2018.
2. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ, ಮಂಗಳೂರು ರವರ ಪತ್ರ ಸಂಖ್ಯೆ: ಪಿಎನ್‌ಡಿಸಿಆರ್/161/ಪಿಡಿಎ/2019-20, ದಿನಾಂಕ:25.11.2020.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ (1)ರ ಅಧಿಸೂಚನೆಯಲ್ಲಿ ಪಶ್ಚಿಮ ಘಟ್ಟಗಳ ಮತ್ತು ಕರ್ನಾಟಕ ಕರಾವಳಿಯ ಜೀವವೈವಿಧ್ಯತೆ, ಪರಂಪರೆ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಮತ್ತು ವಿದ್ಯಾರ್ಥಿಗಳಲ್ಲಿ ವಿಜ್ಞಾನ ಕಲಿಕೆಗಾಗಿ ಉತ್ತೇಜಕ ಪರಿಸರವನ್ನು ಸೃಷ್ಟಿಸಲು ಹಾಗೂ ವಿಜ್ಞಾನ, ತಂತ್ರಜ್ಞಾನ ಇಂಜಿನಿಯರಿಂಗ್ ಮತ್ತು ಗಣಿತ ಆಧಾರಿತ ಅಭಿವೃದ್ಧಿಗಳ ಬಗ್ಗೆ ಸಾಮಾನ್ಯ ಜನರಲ್ಲಿ ಅರಿವುಂಟು ಮಾಡಲು ಜೊತೆಗೆ ಅದಕ್ಕೆ ಸಂಬಂಧಿಸಿದ ಉದ್ದೇಶಗಳಿಗಾಗಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರಿನ ಪಿಲಿಕುಳ ಪ್ರದೇಶದಲ್ಲಿ ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡುವುದಕ್ಕಾಗಿ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಲಾಗಿದೆ.

ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 3(4) ರನ್ವಯ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಸಮಿತಿಗೆ ಮತ್ತು ಕಲಂ 9 ರನ್ವಯ ರಾಜ್ಯಮಟ್ಟದ ಸಲಹಾ ಸಮಿತಿಗೆ ಸಂಸ್ಕೃತಿ, ವನ್ಯಜೀವಿ, ಸಸ್ಯಜೀವಿ, ವಿಜ್ಞಾನ, ತಂತ್ರಜ್ಞಾನ, ಪರಂಪರೆ ಮೀನುಗಾರಿಕೆ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ತಜ್ಞರಾಗಿರುವ ತಲಾ ಮೂರು ಸದಸ್ಯರುಗಳನ್ನು ಸರ್ಕಾರವು ನಾಮ ನಿರ್ದೇಶನ ಮಾಡಿ ಅಧಿಸೂಚಿಸಬೇಕಾಗಿದೆ. ಅಂತೆಯೇ ಅಧಿನಿಯಮದಲ್ಲಿ ತಿಳಿಸಿದಂತೆ ಎರಡು ಸಮಿತಿಗಳಿಗೆ ತಲಾ ಮೂರು ಸದಸ್ಯರನ್ನು ನಾಮ ನಿರ್ದೇಶನ ಮಾಡುವಂತೆ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ, ಮಂಗಳೂರು ಇವರು ಮೇಲೆ ಓದಲಾದ ಕ್ರ.ಸಂ(2)ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿಯವರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಐಟಿಬಿಟಿ 253 ಎಸ್‌ಟಿಎಸ್ 2021,**
**ಬೆಂಗಳೂರು, ದಿನಾಂಕ:15.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 3(4) ರನ್ವಯ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಸಮಿತಿಗೆ ಮತ್ತು ಕಲಂ 9 ರನ್ವಯ ರಾಜ್ಯಮಟ್ಟದ ಸಲಹಾ ಸಮಿತಿಗೆ ಸರ್ಕಾರವು ಮೀನುಗಾರಿಕೆ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ತಜ್ಞರಾಗಿರುವ ಸದಸ್ಯರುಗಳನ್ನು ಈ ಕೆಳಕಂಡಂತೆ ನಾಮ ನಿರ್ದೇಶನ ಮಾಡಿ ಆದೇಶಿಸಿದೆ.

**ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಸಮಿತಿ**

| ಕ್ರ.ಸಂ | ಸರ್ಕಾರದಿಂದ ನಾಮನಿರ್ದೇಶಿತ ಸದಸ್ಯರುಗಳ ಹೆಸರು ಮತ್ತು ವಿಳಾಸ | ತಜ್ಞರಾಗಿರುವ ಕ್ಷೇತ್ರ |
|---|---|---|
| 1. | ಶ್ರೀ ಗೋವಿಂದರಾಜ್ ವಿ,<br>ನಂ.10/35, ಗಾಯತ್ರಿದೇವಿ ಪಾರ್ಕ್ ಎಕ್ಸ್‌ಟೆನ್‌ಷನ್.<br>ಸ್ಟೆಲ್ಲಾ ಮೇರಿಸ್ ಸ್ಕೂಲ್ ರಸ್ತೆ, ಟಿ.ಟಿ.ಡಿ. ದೇವಸ್ಥಾನದ ಹತ್ತಿರ, ಬೆಂಗಳೂರು-56000. | ಪ್ರವಾಸೋದ್ಯಮ |

I/233510/2022

## ರಾಜ್ಯಮಟ್ಟದ ಸಲಹಾ ಸಮಿತಿ

| ಕ್ರ.ಸಂ | ಸರ್ಕಾರದಿಂದ ನಾಮನಿರ್ದೇಶಿತ ಸದಸ್ಯರುಗಳ ಹೆಸರು ಮತ್ತು ವಿಳಾಸ | ತಜ್ಞರಾಗಿರುವ ಕ್ಷೇತ್ರ |
|---|---|---|
| **1.** | **ಶ್ರೀ ಬಿ.ಕೆ.ಶ್ರೀನಿವಾಸಬಾಬು,**<br>ಸಂಜೀವಿನಿ ಎಂಟರ್‌ಪ್ರೈಸಸ್,<br>ನಂ.861, 3ನೇ ಮುಖ್ಯರಸ್ತೆ, 9ನೇ ಕ್ರಾಸ್,<br>ಕೆ.ಎನ್.ಬಡಾವಣೆ, ಯಶವಂತಪುರ,<br>ಬೆಂಗಳೂರು-560 022. | ಮೀನುಗಾರಿಕೆ ಸಣ್ಣ ಕೈಗಾರಿಕೋದ್ಯಮ. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suma. B.S.
15/3/2022

**(ಸುಮ.ಬಿ.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ,
(ವಿಜ್ಞಾನ ಮತ್ತು ತಂತ್ರಜ್ಞಾನ).

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ 1&2)/(ಜಿ & ಎಸ್‌ಎಸ್‌ಎ), ಕರ್ನಾಟಕ, ಬೆಂಗಳೂರು.
2. ಸನ್ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.
5. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು
6. ಸಮಿತಿಯ ಸದಸ್ಯರಿಗೆ- ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ, ಮಂಗಳೂರು ಇವರ ಮೂಲಕ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.